# ಕನ್ನಡ ಪೋಸ್ಟ್

ಇದು ಸುದ್ದಿ ವಿಲಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ    Kannada Daily

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.01 | Issue. 156 | Pages. 2 | Date: 25-04-2025, FRIDAY    RNI NO: KARKAN/2024/89601

ಸಂಪುಟ : 01 - ಸಂಚಿಕೆ : 156 - ಪುಟಗಳು : 2 - 25 ಏಪ್ರಿಲ್ 2025 ಶುಕ್ರವಾರ    Ph: 8762954248    ದರ : ₹1


# ಪಹಲ್ಗಾಮ್ ದಾಳಿ: ಜಿಲ್ಲೆಯಲ್ಲಿ ಉಗ್ರ ಆಕ್ರೋಶ

## ಹಿಂದೂಪರ ಸಂಘಟನೆ-ಬಿಜೆಪಿ-ವಕೀಲರು ಸೇರಿದಂತೆ ಹಲವರಿಂದ ತೀವ್ರ ಆಕ್ರೋಶ: ಭಯೋತ್ಪಾದನೆ ಕೊನೆಗಾಣಿಸಿ








ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ಕನ್ನಡಿಗರೂ ಸೇರಿದಂತೆ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ನರಮೇಧ ಖಂಡಿಸಿ, ವಕ್ಫ್ ಕಾಯ್ದೆ ವಿರೋಧದ ಹೆಸರಿನಲ್ಲಿ ಪೂರ್ವ ಬಂಗಾಳದಲ್ಲಿ ಎದ್ದಿರುವ ಹಿಂಸಾಚಾರ ಖಂಡಿಸಿ ನಗರದಲ್ಲಿಂದು ಮಾಜಿ ಸೈನಿಕರ ಸಂಘ, ಹಿಂದೂಪರ ಸಂಘಟನೆಗಳು, ಬಿಜೆಪಿ ಮತ್ತು ಇತರೆ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಹೇಮಾವತಿ ಪ್ರತಿಮೆ ಬಳಿಯಿಂದ ಕೆಂಪು ಬಾವುಟ ಹಿಡಿದು ಹೊರಟ ನೂರಾರು ಮಂದಿ, ಉಗ್ರರನ್ನು ಸಂಪೂರ್ಣವಾಗಿ ಸದೆ ಬಡಿಯಬೇಕು, ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಮಾರ್ಗಮಧ್ಯೆ ಎನ್.ಆರ್.ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಆಕ್ರೋಶ ಹೊರ ಹಾಕಿದ ಪ್ರತಿಭಟನಾಕಾರರು, ಡಿಸಿ ಕಚೇರಿ ಎದುರಿಗೆ ಬಂದು ಧರಣಿ ನಡೆಸಿದರು.

ಈ ವೇಳೆ ಮಾತನಾಡಿದ ಡಾ.ರಮೇಶ್, ಕಾಶ್ಮೀರ ಭಾರತದ ಮುಕುಟ ಮಣಿ ಎನಿಸಿದೆ. ಹಾಗೆಯೇ ಭಾರತ ಹಿಂದೂರಾಷ್ಟ್ರವಾಗಿದೆ.

ಇದನ್ನು ಬದಲು ಮಾಡಲು ಯಾರಿಂದಲೂ ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ನಾವೆಲ್ಲರೂ ಸಹೋದರರಂತೆ ಇದ್ದರೂ, ಧಾರ್ಮಿಕ ಭಯೋತ್ಪಾದನೆ ಮಾಡುವುದು ನಿಲ್ಲಬೇಕು. ಇದನ್ನು ಕೊನೆಗಾಣಿಸಬೇಕು. 134 ಕೋಟಿ ಜನಸಂಖ್ಯೆ ಇರುವ ಭಾರತದಲ್ಲಿ ಏನೇ ಭಿನ್ನಾಭಿಪ್ರಾಯ ಇದ್ದರೂ, ನಾವೆಲ್ಲರೂ ಒಗ್ಗಟ್ಟಾಗಿ ಇರಬೇಕು ಎಂದು ಕರೆ ನೀಡಿದರು. ಅಖಂಡ ಭಾರತ ಅಮರವಾಗಿರಬೇಕು, ಇಲ್ಲದಿದ್ದರೆ ನಿನ್ನೆ ಕಾಶ್ಮೀರದಲ್ಲಿ ನಡೆದ ನರಮೇಧ, ನಾಳೆ ಹಾಸನದಲ್ಲೂ ನಡೆಯಬಹುದು ಎಂದು ಎಚ್ಚರಿಸಿದರು. ಉಗ್ರರ ಹತ್ತಿಕ್ಕುವ ವಿಚಾರದಲ್ಲಿ ಕೇಂದ್ರ ಕೈಗೊಳ್ಳುವ ನಿರ್ಧಾರಕ್ಕೆ ನಾವೆಲ್ಲರೂ ಬೆಂಬಲವಾಗಿ ನಿಲ್ಲಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಮಾತನಾಡಿದ ನಿವೃತ್ತ ಸೈನಿಕರು, ವಕ್ಫ್ ಕಾಯ್ದೆ ವಿರೋಧದ ಹೆಸರಿನಲ್ಲಿ ಪೂರ್ವ ಬಂಗಾಳವನ್ನು ಹಿಂಸಾಚಾರದ ಅಗ್ನಿಯಲ್ಲಿ ಸುಟ್ಟ ಹಾಕಲಾಗುತ್ತಿದ್ದು ಇದು ನಿಲ್ಲಬೇಕು ಎಂದು ಒತ್ತಾಯಿಸಿದರು.

ಜಿಹಾದಿ ಗುಂಪು 200ಕ್ಕಿಂತ ಅಧಿಕ ಹಿಂದೂಗಳ ಮನೆ ಮತ್ತು ಅಂಗಡಿಗಳನ್ನು ಬೆಂಕಿ ಹಚ್ಚಿ ನಾಶಮಾಡಿದೆ. ನೂರಾರು ಜನರನ್ನು ಗಂಭೀರವಾಗಿ ಗಾಯಗೊಳಿಸಿದೆ. ಮೂವರು ನಾಗರಿಕರನ್ನು ಕೊಂದು ಹಾಕಿತು. ಡಜನ್‌ಗಟ್ಟಲೆ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯವೂ ನಡೆದಿದೆ. ಪರಿಣಾಮವಾಗಿ 500ಕ್ಕೂ ಹೆಚ್ಚು ಹಿಂದೂ ಕುಟುಂಬಗಳು ಮುರ್ಶಿದಾಬಾದ್ ನಿಂದ ಪಲಾಯನ ಮಾಡಿವೆ.

ಅವರಿಗೆ ಭೇಟಿ ನೀಡಿ ಸಹಾಯ ಮಾಡುವ ಬದಲು, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ದಂಗೆಗೆ ಕಾರಣಕರ್ತರಾದ ಇಮಾಮ್‌ಗಳನ್ನು ಭೇಟಿ ಮಾಡುತ್ತಿದ್ದಾರೆ ಎಂದು ಆಕ್ರೋಶ ಹೊರ ಹಾಕಿದರು. ನಂತರ ಎಡಿಸಿ ಕೆ.ಟಿ.ಶಾಂತಲಾ ಅವರ ಮೂಲಕ ರಾಜ್ಯ, ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಹಿಂದೂಪರ ಸಂಘಟನೆಯ ವೇಣುಗೋಪಾಲ್, ಮಹಿಪಾಲ್, ಬಿಜೆಪಿ ಮುಖಂಡರಾದ ಆರ್.ಮೋಹನ್, ಕಿರಣ್, ಚನ್ನಕೇಶವ ಮೊದಲಾದವರಿದ್ದರು.

**ವಕೀಲರ ಪ್ರತಿಭಟನೆ:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕ ಪ್ರವಾಸಿಗರ ನಡೆದ ನರಮೇಧ ಖಂಡಿಸಿ ಜಿಲ್ಲಾ ವಕೀಲರ ಸಂಘದವರೂ ಪ್ರತಿಭಟನೆ ನಡೆಸಿದರು. ಇಂದು ಬೆಳಗ್ಗೆ ಕಲಾಪ ಬಹಿಷ್ಕರಿಸಿ ಕೋರ್ಟ್ ಮುಂಭಾಗದ ಪ್ರತಿಭಟನೆ ನಡೆಸಿದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ನೂರಾರು ವಕೀಲರು, ಉಗ್ರವಾದದ ವಿರುದ್ಧ ಆಕ್ರೋಶ ಹೊರ ಹಾಕಿದರು. ಅಮಾಯಕರನ್ನು ಬಲಿ ಪಡೆದ ರಣಹೇಡಿಗಳನ್ನು ತೀವ್ರವಾಗಿ ದಂಡಿಸಬೇಕು.ಇದಕ್ಕೆ ಭಾರತ ಪ್ರತ್ಯುತ್ತರ ನೀಡಬೇಕು ಎಂದು ಆಗ್ರಹಿಸಿದರು.

## ಹೊಳೆನರಸೀಪುರದಲ್ಲಿ ಇಂದು ಪ್ರತಿಭಟನೆ



ಹೊಳೆನರಸೀಪುರ : ಕಾಶ್ಮೀರದಲ್ಲಿ ಹಿಂದೂ ಹತ್ಯಾಕಾಂಡ ವಿರೋಧಿಸಿ ಹಾಗೂ ಪಶ್ಚಿಮ ಬಂಗಾಳ ಹಿಂಸಾಚಾರ ಖಂಡಿಸಿ ಹಿಂದೂ ಹಿತ ರಕ್ಷಣಾ ವೇದಿಕೆ ವತಿಯಿಂದ ಇಂದು ಪ್ರತಿಭಟನೆ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಪಟ್ಟಣದ ರಾಜ ಬೀದಿಯಲ್ಲಿರುವ ಶ್ರೀ ರಾಮ ಬ್ರಹ್ಮಾನಂದ ಪ್ರವಚನ ಮಂದಿರದಲ್ಲಿ ಹಿಂದೂ ಸಮಾಜ ಬಾಂಧವರ ತುರ್ತು ಸಭೆಯಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಉಗ್ರರ ದಾಳಿ ಹಾಗೂ ಪಶ್ಚಿಮ ಬಂಗಾಳದಲ್ಲಿ ಹಿಂದುಗಳ ಮೇಲಿನ ಕ್ರೌರ್ಯದ ಬಗ್ಗೆ ಚರ್ಚೆ ನಡೆಯಿತು.

ಈ ಹಿಂಸಾತ್ಮಕ ಆಕ್ರಮಣ ಖಂಡಿಸಿ ಪಟ್ಟಣದಲ್ಲಿ ಏ.25ರ ಶುಕ್ರವಾರ ಬೆಳಗ್ಗೆ 10 ಗಂಟೆಯಿಂದ ಪ್ರತಿಭಟನೆ ನಡೆಸಲು ಸಭೆ ಒಮ್ಮತದಿಂದ ಸಮ್ಮತಿ ಸೂಚಿಸಿತು.

ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 12 ಗಂಟೆವರೆಗೆ ಅಂಗಡಿ ಮುಂಗಟ್ಟು ಬಂದ್ ಮಾಡಿ, ನಂತರ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸೀಲ್ದಾರ್ ಮೂಲಕ ಮನವಿ ಸಲ್ಲಿಸಲು ತೀರ್ಮಾನಿಸಲಾಯಿತು.

ವರ್ತಕರ ಸಂಘದ ಕಾರ್ಯದರ್ಶಿ ಭರತ್, ಹುತಾತ್ಮರ ಗೌರವಾರ್ಥ ಮತ್ತು ಪ್ರತಿಭಟನೆಗೆ ಬೆಂಬಲ ಸೂಚಿಸಿ ಮಧ್ಯಾಹ್ನದವರೆಗೆ ಅಂಗಡಿ ಮುಂಗಟ್ಟು ಮುಚ್ಚುವುದಾಗಿ ಹೇಳಿದರು.

ಸಭೆಯಲ್ಲಿ ಪುರಸಭಾಧ್ಯಕ್ಷ ಎಚ್.ಕೆ.ಪ್ರಸನ್ನ, ಮಾಜಿ ಅಧ್ಯಕ್ಷ ಕೆ.ಶ್ರೀಧರ್, ಹಿರಿಯರಾದ ಸುಕುಮಾರ್, ರಾಘವೇಂದ್ರ, ರಂಗನಾಥ್, ಮುತ್ತುರಾಜ್, ವಾಸುದೇವಮೂರ್ತಿ, ಗೋಕುಲ್ ಎಸ್., ಡಾ. ಹರ್ಷ, ಮಯೂರ್ ಮಂಜು, ಕಿಶೋರ್, ಬಾಬು, ರಮೇಶ್, ದಯಾನಂದ, ನಾಗೇಂದ್ರ, ಯೋಗಾನರಸಿಂಹ, ಮಳಲಿ ನಾರಾಯಣ್, ಕಡುವಿನಕೋಟೆ ಲೋಕೇಶ್ ಇತರರಿದ್ದರು.

## ಟೈರ್‌ಗೆ ಬೆಂಕಿ ಹಚ್ಚಿ ಪ್ರತಿಭಟನೆ

ಬೇಲೂರು : ಪಟ್ಟಣದಲ್ಲೂ ಭಜರಂಗದಳ, ಶ್ರೀರಾಮಸೇನೆ ಹಾಗೂ ವಿಶ್ವ ಹಿಂದೂ ಪರಿಷತ್ ವತಿಯಿಂದ ಬಸವೇಶ್ವರ ವೃತ್ತದಲ್ಲಿ ಟೈರ್‌ಗೆ ಬೆಂಕಿ ಹಚ್ಚಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಪಾಕಿಸ್ತಾನ ಹಾಗೂ ಭಯೋತ್ಪಾದಕರನ್ನು ಬೆಂಬಲಿಸುತ್ತಿರುವವರ ವಿರುದ್ಧ ಧಿಕ್ಕಾರ ಕೂಗಿದರು. ಈ ವೇಳೆ ಮಾತನಾಡಿದ ಬಿಜೆಪಿ ಮುಖಂಡ ಸಂತೋಷ್, ಹಿಂದೂಗಳ ಹತ್ಯೆಯನ್ನು ಖಂಡಿಸಿದರು. ನರ ಹೇಡಿಗಳಾದ ಕಾಶ್ಮೀರದಲ್ಲಿ ನೆಲೆಸಿರುವ ಮುಸ್ಲಿಂ ಭಯೋತ್ಪಾದಕರನ್ನು ಕಂಡಲ್ಲಿ ಗುಂಡಿಟ್ಟು ಅವರನ್ನೂ ಹತ್ಯೆ ಮಾಡಬೇಕು. ಉಗ್ರರ ಪರವಾಗಿರುವವರನ್ನು ಬೆಂಬಲಿಸುವ ನಾಯಕರಿಗೆ ನಾಚಿಕೆಯಾಗಬೇಕು. ದೇಶದ ಪ್ರತಿಯೊಬ್ಬ ಹಿಂದೂಗಳೂ ಒಗ್ಗಟ್ಟಾಗಿ ಉಗ್ರರನ್ನು ಸದೆ ಬಡಿಯಬೇಕು ಎಂದು ಆಗ್ರಹಿಸಿದರು. ಅಮಾಯಕರನ್ನು ಬಲಿ ಪಡೆದ ನರಹಂತಕರನ್ನು ಇಡೀ ದೇಶದಿಂದ ಹೊರಗಟ್ಟುವ ಕೆಲಸ ಮಾಡಬೇಕು ಎಂದ ಅವರು, ಇದು ಸಾಂಕೇತಿಕವಾಗಿ ಬೆಂಕಿ ಹಚ್ಚಿದ್ದೇವೆ. ಮುಂದಿನ ದಿನಗಳಲ್ಲಿ ಎಲ್ಲೆಲ್ಲಿಗೆ ವ್ಯಾಪಿಸಲಿದೆ ಎಂದು ಕಾದು ನೋಡಿ ಎಂದರು. ಭಜರಂಗದಳ ತಾಲೂಕು ಸಂಚಾಲಕ ನಾಗೇಶ್ (ಗುಂಡ) ಮಾತನಾಡಿ, ಉಗ್ರರನ್ನು ಗುಂಡಿಟ್ಟು ಕೊಲ್ಲಬೇಕು ಎಂದು ಆಗ್ರಹಿಸಿದರು.

ರಾಷ್ಟ್ರೀಯ ಬಿಜೆಪಿ ಪ್ರಕೋಷ್ಠ ಸದಸ್ಯರಾದ ಜೆ.ಕೆ ಕುಮಾರ್ ಮಾತನಾಡಿದರು.

ಈ ಸಂದರ್ಭದಲ್ಲಿ ಆರ್‌ಎಸ್‌ಎಸ್ ಪ್ರಮುಖ್ ಪ್ರಸನ್ನ, ಡಾ ನಾರಾಯಣಸ್ವಾಮಿ, ಮೋಹನ್ ಕುಮಾರ್, ಸುಮಂತ್, ಮಂಜು, ಭರತ್, ತೀರ್ಥಂಕರ್, ದೀಪು, ಸಂಜು, ವೇದಬ್ರಹ್ಮ ಮಂಜುನಾಥ್, ವಿನಯ್, ಧನಪಾಲ್, ಮಹೇಶ್, ಸಂತೋಷ್, ಗಜೇಂದ್ರ ಮೊದಲಾದವರಿದ್ದರು.

# ಭಾಗ್ಯವೂ ಇಲ್ಲ-ಕಾಮಗಾರಿಯೂ ಇಲ್ಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಮುಖ್ಯಮಂತ್ರಿ ಸಿದ್ದರಾಮಯ್ಯ ಕುರ್ಚಿಗಾಗಿ ಏನೆಲ್ಲಾ ಮಾಡುತ್ತಿದ್ದಾರೆ ಎಂಬುದು ಇಡೀ ದೇಶಕ್ಕೆ ಗೊತ್ತು. ಗ್ಯಾರಂಟಿ ಭಾಗ್ಯ ಅಂತಾರೆ, ಈಗ ಭಾಗ್ಯನೂ ಇಲ್ಲ ಕಾಮಗಾರಿಗೆ ದುಡ್ಡು ಇಲ್ಲ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ವಿ. ಸೋಮಣ್ಣ ವ್ಯಂಗ್ಯವಾಡಿ ವಾಗ್ದಾಳಿ ನಡೆಸಿದರು.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದಿಂದ ತೆರಿಗೆ ಹಣ ರಾಜ್ಯಕ್ಕೆ ಬರುತ್ತಿಲ್ಲ ಎಂಬ ಸಿಎಂ ಆರೋಪಕ್ಕೆ ಸಿದ್ದರಾಮಯ್ಯ ಈಗ ಪುಸ್ತಕಾನೆ ಓದುತ್ತಿಲ್ಲ.

ಹಿಂದೆ ಇದ್ದ ಸಿದ್ದರಾಮಯ್ಯ ಇವತ್ತಿಲ್ಲ. ಕುರ್ಚಿಗೋಸ್ಕರ ಏನೆಲ್ಲ ಮಾಡ್ತಿದ್ದಾರೆ ಅಂತ ಇಡೀ ದೇಶಕ್ಕೆ ಗೊತ್ತು ಎಂದು ತಿರುಗೇಟು ನೀಡಿದರು.

ಯಾವುದೇ ಕೆಲಸ ಮಾಡೋದಕ್ಕೂ ಅವರ ಹತ್ತಿರ ಸಂಪತ್ತಿಲ್ಲ. ಹಾಗಾಗಿ ಜನರನ್ನ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಆದರೆ ಮೋದಿ ಸರ್ಕಾರ ನೂರು ಪಟ್ಟು ಕೆಲಸ ಮಾಡುತ್ತಿದೆ.

ಈಶಾನ್ಯ ರಾಜ್ಯಗಳಿಗೆ ಹೋದರೆ ಅಭಿವೃದ್ಧಿ ಗೊತ್ತಾಗುತ್ತದೆ ಎಂದರು. ನೀವು ಮತ್ತು ನಿಮ್ಮ ಅಧಿಕಾರಿಗಳನ್ನ ಒಂದು ವಾರ ಕರ್ಕೊಂಡ್ ಬನ್ನಿ. ಮೋದಿ ಕಚೇರೀಲಿ ಬೇಡ, ನನ್ನ ಕಚೇರೀಲಿ ಕುಳಿತು, ಆಡಳಿತ ಅಂದ್ರೇನು, ಪಾರದರ್ಶಕತೆ ಅಂದ್ರೇನು, ಸಾಮಾನ್ಯ ಜನರಿಗೆ ಹೇಗೆ ಸವಲತ್ತು ನೀಡಬಹುದು ಎಂಬುದನ್ನ ಬಂದು ನೋಡ್ರಿ, ಆಮೇಲಾದ್ರು ಒಂದು ಹಂತಕ್ಕೆ ತರೋಣ ಎಂದೆ. ಕೇಂದ್ರ ಮತ್ತು ರಾಜ್ಯ ಒಂದು ನಾಣ್ಯದ ಎರಡು ಮುಖವಾಗಿ ಒಟ್ಟಾಗಿ ಕೆಲಸ ಮಾಡಿದ್ರೆ ಹೇಗೆಲ್ಲಾ ಕೆಲಸ ಆಗುತ್ತೆ ಅನ್ನೋದಕ್ಕೆ ಅನೇಕ ಉದಾಹರಣೆ ಕೊಟ್ಟಿದ್ದೇವೆ. ಆದರೆ ಅವರಿಗೆ

ಸತ್ಯ ಮಾತಾಡೋಕೆ ತಯಾರಿಲ್ಲ. ಏನೊ ಒಂದು ಹೇಳೋದು ತಪ್ಪಿಸಿಕೊಳ್ಳೋದು ಅಷ್ಟೆ. ಇನ್ನೊಬ್ಬರ ಹೆಗಲ ಮೇಲೆ ಗನ್ ಇಟ್ಟು ಹೊಡೆಯೋದನ್ನ ಬಿಟ್ಟು ಅವರ ಗನ್ ಪರಿಸ್ಥಿತಿ ಏನಾಗಿದೆ ನೋಡಿಕೊಂಡು ಕೆಲಸ ಮಾಡಿದ್ರೆ ಇನ್ನೂ ಚನ್ನಾಗಿ ಆಗಬಹುದು ಎಂದು ಸಲಹೆ ನೀಡಿದರು.

ಪ್ರಧಾನಿ ಮೋದಿ ಅವರು, ಭವಿಷ್ಯದ ಭಾರತಕ್ಕೆ ಒಂದು ಸಂದೇಶ ಕೊಡುತ್ತಿದ್ದಾರೆ. ಈಗ ಆಗಿರುವ ಕಹಿ ಘಟನೆ ಸಂಬಂಧ ಹೇಗೆ ನಡೆದುಕೊಳ್ಳಬೇಕು ಎಂಬ ರಾಜತಾಂತ್ರಿಕ ತೀರ್ಮಾನವನ್ನ ಇಡೀ ವಿಶ್ವವೇ ಮೆಚ್ಚಿಕೊಳ್ತಿದೆ ಎಂದರು.

ರೈಲ್ವೆ ಯೋಜನೆಗಳಿಗೂ ರಾಜ್ಯ ಸರ್ಕಾರ ತನ್ನ ಪಾಲು ಕೊಡುತ್ತಿಲ್ಲ. ಆದರೂ ಹಲವು ಕೆಲಸಕ್ಕೆ ಚಾಲನೆ ನೀಡಲಾಗಿದೆ. ಗ್ಯಾರಂಟಿ ಭಾಗ್ಯ ಅಂದ್ರು, ಈಗ ಭಾಗ್ಯನೂ ಇಲ್ಲಾ,

ಕಾಮಗಾರಿಗೆ ದುಡ್ಡು ಸಹ ಇಲ್ಲ ಎಂದು ಲೇವಡಿ ಮಾಡಿದರು. ಈ ವೇಳೆ ಬಿಜೆಪಿ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಮುಖಂಡರಾದ ಶೋಭನ್ ಬಾಬು, ಹೆಚ್.ಎನ್. ನಾಗೇಶ್, ಚನ್ನಕೇಶವ, ಕಟ್ಟಾಯ ಶಿಕುಮಾರ್, ಮಯೂರಿ, ನಾಗೇಶ್ ಇದ್ದರು.

# ಬೇಲೂರು-ಚಿಕ್ಕಮಗಳೂರು ರೈಲು ಸಂಚಾರ ಶೀಘ್ರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಳೇಬೀಡು: ಬೇಲೂರು ಚಿಕ್ಕಮಗಳೂರು ರೈಲು ಸಂಚಾರಕ್ಕೆ ಶೀಘ್ರದಲ್ಲಿಯೇ ಚಾಲನೆ ನಿಡೀತ್ತೇವೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು

ಹಳೇಬೀಡಿನ ಪಾರ್ವತಮ್ಮ ನಂಜೇಗೌಡ ಕಲ್ಯಾಣ ಮಂಟಪದಲ್ಲಿ ಗುರುವಾರ ನಡೆದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಜಯಶೀಲ ಜಯಶಂಕರ್ ಅವರ ಪುತ್ರಿಯ ವಿವಾಹ ಕಾರ್ಯಕ್ರಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು. ಚಿಕ್ಕಮಗಳೂರಿನಿಂದ ಹಾಸನ ರೈಲು ಮಾರ್ಗ ಕಾಮಗಾರಿ ಬೇಲೂರು ಮಾದಿಹಳ್ಳಿವರೆಗೂ ಪೂರ್ಣಗೊಂಡಿದೆ. ಮಾದಿಹಳ್ಳಿಯಿಂದ ಆಲೂರುವರೆಗೆ ಭೂಸ್ವಾಧೀನ ಪ್ರಕ್ರಿಯೆ ಮುಗಿದಿದೆ. ಹಾಸನ ಜಿಲ್ಲಾಧಿಕಾರಿ ಶ್ರಮವಹಿಸಿ ಭೂಸ್ವಾಧೀನ ಕ್ರಮ ಕೈಗೊಂಡಿದ್ದರಿಂದ ರೈಲು ಮಾರ್ಗ ಕಾಮಗಾರಿಗೆ ಅನುಕೂಲವಾಗಿದೆ ಎಂದರು.

ಹಿಂದೆ ರೈಲ್ವೆ ಇಲಾಖೆಗೆ ₹800 ಕೋಟಿ ಮಾತ್ರ ಅನುದಾನ ಬರುತ್ತಿತ್ತು. ಮೋದಿ ಅವರು ಪ್ರಧಾನಮಂತ್ರಿಯಾದ ನಂತರ ₹1700 ಕೋಟಿ ಅನುದಾನ ಬರುತ್ತಿದೆ. ರೈಲು ಮಾರ್ಗಗಳ ಅಭಿವೃದ್ದಿಯ ಜೊತೆಗೆ ಹೊಸ ರೈಲು ಮಾರ್ಗಗಳು ನಿರ್ಮಾಣ ಆಗುತ್ತಿವೆ. ರೈಲು ಮಾರ್ಗದ ಮೇಲು ಹಾಗೂ ಕೇಳ ಸೇತುವೆಗಳನ್ನು ಪ್ರಧಾನಿ ಮೋದಿ ಅವರು ಕೇಂದ್ರ ಸರ್ಕಾರದಿಂದ ನಿರ್ಮಿಸುವ ಕ್ರಮ ಕೈಗೊಂಡಿದ್ದಾರೆ. ಕುಕ್ಕೆ ಸುಬ್ರಹ್ಮಣ್ಯ ರಿಂದ ಮಂಗಳೂರಿಗೆ ಎರಡು ಟ್ರಿಪ್ ರೈಲು ಸಂಚಾರ ಆರಂಬಿಸಲಾಗಿದೆ ಎಂದು ಸೋಮಣ್ಣ ಹೇಳಿದರು.

ಪುಷ್ಪಗಿರಿ ಮಠಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಪುಷ್ಪಗಿರಿ ಹಾಗೂ ಹಳೇಬೀಡಿಗೆ ಆಗಮಿಸುವ ಪ್ರವಾಸಿಗರ ಅನುಕೂಲಕ್ಕಾಗಿ ರೈಲು ಮಾರ್ಗ ನಿರ್ಮಿಸುವಂತೆ ಮನವಿ ಮಾಡಿದರು. ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಶಾಸಕ ಎಚ್.ಕೆ.ಸುರೇಶ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಜಯಶೀಲ ಜಯಶಂಕರ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್ ನಾಗೇಂದ್ರ,

ಬೇಲೂರು ತಾಲ್ಲೂಕು ವಿರಶೈವ ಲಿಂಗಾಯಿತ ಮಹಾಸಭಾ ಅಧ್ಯಕ್ಷ ಎ.ಎಸ್.ಬಸವರಾಜು ಮುಖಂಡರಾದ

ಪಟೇಲ್ ಕಾಂತರಾಜು , ಗಂಗೂರು ಶಿವಕುಮಾರ್, ದೊರೆಸ್ವಾಮಿ, ಸಿದ್ದರಾಜು

ಸಾರಿಗೆ ಸಂಸ್ಥೆ ನಿವೃತ್ತ ಅಧಿಕಾರಿ ರಾಜಶೇಖರ್ ಭಾಗವಹಿಸಿದ್ದರು.

ತಹಶಿಲ್ದಾರ್ ಎಂ.ಮಮತ, ಹೆಚ್ಚುವರಿ ಎಸ್ಪಿ ಶಾಲು, ಸಿಪಿಐ ರೇವಣ್ಣ, ಪಿಎಸ್‌ಐ ಸಿದ್ದಲಿಂಗ ಬಾನಸೆ ಬಿಗಿಬಂದೋಬಸ್ತ್ ಕ್ರಮ ಕೈಗೊಂಡಿದ್ದರು.




ನಗರದ ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳ ವಾಲಿಬಾಲ್ ತಂಡ ಏಪ್ರಿಲ್ 22 ಹಾಗೂ 23 ರಂದು ರಾಜೀವ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ನಡೆದ ವಿಟಿಯು ಅಂತರ ಕಾಲೇಜು ಮಧ್ಯ ಕರ್ನಾಟಕ ವಿಭಾಗದ ವಾಲಿಬಾಲ್ ಪಂದ್ಯಾವಳಿಯಲ್ಲಿ ಮೊದಲ ಸ್ಥಾನ ಗಳಿಸಿದೆ.

# ಏ.28 ರಂದು ಲೋಕಾ ಅಹವಾಲು ಸ್ವೀಕಾರ ಸಭೆ

ಹಾಸನ: ಜಿಲ್ಲಾ ಲೋಕಾಯುಕ್ತ ಕಚೇರಿ ವತಿಯಿಂದ ತಾಲ್ಲೂಕು ಕಚೇರಿಯಲ್ಲಿ ಏ.28 ರಂದು ಬೆಳಗ್ಗೆ 11.30 ರಿಂದ ಮಧ್ಯಾಹ್ನ 1.30 ರವರೆಗೆ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಸಮಯಕ್ಕೆ ಸರಿಯಾಗಿ ಸ್ಪಂದಿಸದೆ ಇರುವ ಬಗ್ಗೆ ಸರ್ಕಾರಿ ಅಧಿಕಾರಿಗಳ ವಿರುದ್ಧ ಬರುತ್ತಿರುವ ದೂರು ಹಿನ್ನಲೆಯಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳ ನಿರ್ವಹಣೆ ಉದ್ದೇಶ ಸಾಕಾರಗೊಳಿಸುವ ನಿಟ್ಟಿನಲ್ಲಿ ಮತ್ತು ಸರ್ಕಾರಿ ಕಚೇರಿಯ ಕೆಲಸ ಕಾರ್ಯಗಳಲ್ಲಿ ಪಾರದರ್ಶಕತೆ ತರುವ ನಿಟ್ಟಿನಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಸಭೆ ಹಮ್ಮಿಕೊಳ್ಳಲಾಗಿದೆ.

ತಾಲ್ಲೂಕು ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿರುವ ಸಾರ್ವಜನಿಕರ ಅಹವಾಲು ಸಭೆಗೆ ನಿಗದಿತ ದಿನಾಂಕ ಮತ್ತು ಸಮಯದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಕುಂದು-ಕೊರತೆಗಳ ಬಗ್ಗೆ ಅಹವಾಲುಗಳನ್ನು ಸಲ್ಲಿಸಲು ಕರ್ನಾಟಕ ಲೋಕಾಯುಕ್ತ ಹಾಸನ ವಿಭಾಗದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

# ಡಾ. ರಾಜಕುಮಾರ್-ಪುನಿತ್ ರಾಜಕುಮಾರ್ ಜೀವನ ಅನುಕರಣೀಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಡಾ. ರಾಜಕುಮಾರ್ ಅವರ ಸರಳತೆ. ಅವರು ನಡೆದುಕೊಂಡು ಬಂದ ದಾರಿ ಹಾಗೂ ಪುನಿತ್ ರಾಜಕುಮಾರ್ ನಡೆದ ದಾರಿ ಎಲ್ಲಾವೂ ಕೂಡ ನಾವು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಭವಿಷ್ಯ ಕಟ್ಟಿಕೊಳ್ಳಬೇಕಾಗಿದೆ ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಕರೆ ನೀಡಿದರು.

ನಗರದ ಎಂ.ಜಿ. ರಸ್ತೆ ಬಳಿ ಇರುವ ಗಾಂಧಿ ಭವನದಲ್ಲಿ ವ್ಯೂಮೆನ್ಸ್ ರೈಟ್ಸ್ ಹಾಗೂ ವಾಯು ವಿಹಾರ ಮಾಡುವವರಿಂದ ಗುರುವಾರ ಬೆಳಿಗ್ಗೆ ಹಮ್ಮಿಕೊಳ್ಳಲಾಗಿದ್ದ ಡಾ. ರಾಜಕುಮಾರ್ ಅವರ 97ನೇ ವರ್ಷದ ಜನ್ಮ ದಿನಾಚರಣೆಯನ್ನು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಡಾ. ರಾಜಕುಮಾರ್ ಅವರು ಒಂದು ತುತ್ತು ಬಿಡದೆ ಊಟ ಮಾಡುವ ಮೂಲಕ ಅನ್ನದ ಮೇಲೆ ಪ್ರೀತಿ ನಮ್ಮ ಕನ್ನಡಿಗರು ಎಲ್ಲಾರು ಕಲಿಯ ಬೇಕಾದ ಆದರ್ಶ. ರಾಜಕುಮಾರ್ ಅವರ ಸರಳತೆ. ಅವರು ನಡೆದುಕೊಂಡು ಬಂದ ದಾರಿ, ಪುನಿತ್ ರಾಜಕುಮಾರ್ ನಡೆದುಕೊಂಡು ಬಂದ ದಾರಿ ಎಲ್ಲಾವೂ ಕೂಡ ನಾವು ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ ಎಂದರು. ಡಾ. ರಾಜಕುಮಾರ್ ಜನ್ಮ ದಿನಾಚರಣೆ ಆದರೂ ಕೂಡ ಪುನಿತ್ ರಾಜಕುಮಾರ್ ಯುವ ಜನರಿಗೆ ಆದರ್ಶ. ಪುನಿತ್ ಅವರು ಮಾತನಾಡುವಾಗ ಯಾವಾಗಲೂ ನಗು ಮುಖದಲ್ಲಿ ಇರುತ್ತಿದ್ದರು. ಸ್ಮೈಲ್ ಗೆ ಕನ್ನಡಿಗರು ಇಷ್ಟ ಪಡಲಿಲ್ಲ. ಆದರೇ ಅವರು ಮಾಡಿರುವ ಸೇವಾ ಕಾರ್ಯಗಳು ಸಮಾಜದಲ್ಲಿ ಇಷ್ಟಪಟ್ಟರು. ಸಮಾಜದ ಒಳಿತಿಗಾಗಿ ಅವರು ಕೆಲಸ ಮಾಡಿ ಜನಪ್ರಿಯಗೊಂಡರು. ಡಾ. ರಾಜಕುಮಾರ್ ಚಲನಚಿತ್ರದಲ್ಲಿ ಒಂದು ಸಂದೇಶವಿತ್ತು ಎಂದು ಕಿವಿಮಾತು ಹೇಳಿದರು. ಜೀವನದಲ್ಲಿ ಅಳವಡಿಸಿಕೊಳ್ಳುವ ಸನ್ನಿವೇಶಗಳು ಪ್ರತಿ ಸಿನಿಮಾದಲ್ಲೂ ಸಿಗುತಿತ್ತು. ಎಷ್ಟೆ ನಟರು ಬಂದು ಹೋದರೂ ರಾಜಕುಮಾರ್ ಜೀವನ ಶೈಲಿ, ಸರಳತೆ ಅವರ ಹಾಡುಗಳು ಆಗೆ ಅವರು ಹಾಕಿ ಕೊಟ್ಟ ಕನ್ನಡದ ಹಾದಿ ಇರಬಹುದು ಇದೆಲ್ಲಾ ನಮಗೆ ಮಾಧರಿ. ಇಂದು ಸಂಭ್ರಮ ಪಡುವುದಲ್ಲ. ಜಮ್ಮು ಕಾಶ್ಮೀರದಲ್ಲಿ ನಡೆದಂತಹ ಘಟನೆ ನಮಗೆ ಬಹಳಷ್ಟು ಪಾಠವನ್ನು ಕಲಿಸಿದೆ.

ಈ ಬಗ್ಗೆ ಎಲ್ಲಾರೂ ಎಚ್ಚೆತ್ತುಕೊಳ್ಳಬೇಕು ಎಂದು ಇದೆ ವೇಳೆ ಡಾ ರಾಜಕುಮಾರ್ ಜನ್ಮ ದಿನಾಚರಣೆಗೆ ಶುಭಾಶಯ ಕೋರಿದರು.

ಟೈಮ್ಸ್ ಗುರುಕುಲ ಸಿ.ಬಿ.ಎಸ್.ಇ. ಶಾಲೆಯ ಅಧ್ಯಕ್ಷ ಎ.ಬಿ. ಸುರೇಂದ್ರ ಕುಮಾರ್ ಮಾತನಾಡಿ, ಡಾ. ರಾಜಕುಮಾರ್ ಅವರಿಗೆ ವಿಧ್ಯೆ ಎಂಬುದು ಇರಲಿಲ್ಲ. ಆದರೇ ಅವರಿಗೆ ಎಲ್ಲಾ ಭಾಷೆಗಳು ಬರುತಿತ್ತು. ಶಾಲೆಗಳಲ್ಲಿ ಮಾತೃ ಭಾಷೆ ಕಡಿಮೆ ಮಾಡಿ, ಇಂಗ್ಲೀಷ್ ಮತ್ತು ಹಿಂದಿ ಭಾಷೆ ಹಾಗೂ ಬೇರೆ ಬೇರೆ ಭಾಷೆ ಕಲಿಸಬೇಕೆಂದು ಮಕ್ಕಳಿಗೆ ಒತ್ತಡವನ್ನು ಹಾಕಲಾಗುತ್ತಿದೆ. ನಾನು ಶೈಕ್ಷಣಿಕ ಕ್ಷೇತ್ರದಲ್ಲಿ ಕಳೆದ 28 ವರ್ಷಗಳಿಂದಲೂ ಕೆಲಸ ಮಾಡುತ್ತಿದ್ದು, ನಾವು ಓದಿರುವುದು ಕನ್ನಡ ಭಾಷೆ. ಈಗ ಕನ್ನಡದಲ್ಲಿ ಯುಪಿಎಸ್ ಪರೀಕ್ಷೆ ಬರೆದು ಪಾಸಾಗಿದ್ದಾರೆ ಎಂದರು. ರಾಜಕುಮಾರ್ ಅವರು ಕನ್ನಡ ಭಾಷೆ ಬಿಟ್ಟು ಬೇರೆ ಯಾವ ಭಾಷೆಗೂ ಹೋಗಿರುವುದಿಲ್ಲ. ಅಂದಿನ ಕಾಲಘಟ್ಟದಲ್ಲಿ ಇಂಗ್ಲೀಷ್, ಹಿಂದಿ, ತಮಿಳು ಸೇರಿದಂತೆ ಎಲ್ಲಾ ಭಾಷೆಗಳಲ್ಲಿ ಸಾಕಷ್ಟು ಅವಕಾಶಗಳಿತ್ತು. ನಮ್ಮ ರಾಜ್ಯ ಏಕೈಕ ನಟ ಎಂದರೆ ಹಾಗೂ ಬಂಗಾರದ ಮನುಷ್ಯ ಎಂದರೇ ರಾಜಕುಮಾರ್ ಅವರು ಕನ್ನಡದಲ್ಲೇ ಇಷ್ಟೊಂದು ಸಾಧನೆ ಮಾಡಿದ್ದಾರೆ ಎಂದು ಇದೆ ವೇಳೆ ಶ್ಲಾಘಿಸಿದರು.

ಇದೆ ವೇಳೆ ಯುವಜನ ಕ್ರೀಡಾ ಇಲಾಖೆ ಸಹಯಕ ನಿರ್ದೇಶಕ ಸಿ.ಕೆ. ಹರೀಶ್, ವ್ಯೂಮೆನ್ಸ್ ರೈಟ್ಸ್ ಜಿಲ್ಲಾಧ್ಯಕ್ಷ ಬಸವರಾಜು, ರಾಮಗಿರಿ, ಧರ್ಮರಾಜ್ ಕಡಗ, ಲೋಕೇಶ್ ಇತರರು ಉಪಸ್ಥಿತರಿದ್ದರು.

# ಬಸವ ಜಯಂತಿ ಆಚರಣೆಗೆ ಎಲ್ಲರ ಸಹಕಾರ ಅಗತ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಪಟ್ಟಣದಲ್ಲಿ ತಾಲ್ಲೂಕು ಆಡಳಿತ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಏ.30 ರಂದು ಬಸವ ಜಯಂತಿ ಸಮಾರಂಭದ ಅದ್ದೂರಿ ಆಯೋಜನೆಗೆ ಸರ್ವರೂ ಸಹಕಾರ ನೀಡಬೇಕು ಎಂದು ಶಾಸಕ ಎಚ್. ಕೆ.ಸುರೇಶ್ ಮನವಿ ಮಾಡಿದರು.

ತಮ್ಮ ಅಧ್ಯಕ್ಷತೆಯಲ್ಲಿ ಗುರುವಾರ ಆಯೋಜಿಸಿದ್ದ ಬಸವ ಜಯಂತಿ ಆಚರಣೆ ಪೂರ್ವಭಾವಿ ಸಭೆಯಲ್ಲಿ ಅವರು ಮಾತಮಾಡಿದರು.

ವಿಶ್ವಗುರು ಬಸವಣ್ಣನವರು ಒಂದು ಜಾತಿ,ಧರ್ಮಕ್ಕೆ ಸೀಮಿತವಾಗಿಲ್ಲ, ಅವರು ಸಾಮಾಜಿಕ ಕಳಕಳಿ ಮತ್ತು ಜನಪರ ಚಿಂತನೆಗಳು ನಮಗೆ ದಾರಿದೀಪವಾಗಿದೆ. ಇದನ್ನು ಮನಗೊಂಡು ಪ್ರಧಾನಿ ನರೇಂದ್ರಮೋದಿ ಇದೇ ಪ್ರಥಮ ಬಾರಿಗೆ ದೆಹಲಿ ಸಂಸತ್ ಭವನದಲ್ಲಿ ಬಸವ ಜಯಂತಿ ಕಾರ್ಯಕ್ರಮ ನಡೆಸಲು ಮುಂದಾಗಿರುವುದು ಶ್ಲಾಘನಿಯ.

ಬೇಲೂರಿನಲ್ಲಿ ಆಯೋಜಿಸುವ ಬಸವ ಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸಲು ಸಮಾಜದ ಮುಖಂಡರು ಹೆಚ್ಚಿನ ಸಹಕಾರ ನೀಡಬೇಕು ಎಂದ ಅವರು ಪಟ್ಟಣದ ಹೃದಯ ಭಾಗದ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ತಾಲ್ಲೂಕು ಆಡಳಿತದಿಂದ ಆಯೋಜಿಸುವ ಸಭಾ ಕಾರ್ಯಕ್ರಮದಲ್ಲಿ ಭಾಗವಹಿಸಲಾಗುತ್ತದೆ ಎಂದರು.

ತಹಸೀಲ್ದಾರ್ ಎಂ.ಮಮತ ಮಾತನಾಡಿ, ಪ್ರತಿ ವರ್ಷ ಬಸವೇಶ್ವರ ವೃತ್ತದಲ್ಲಿ ಪೂಜೆ ಸಲ್ಲಿಸಿದ ಬಳಿಕ ತಾಲ್ಲೂಕು ಕಚೇರಿಯಲ್ಲಿ ಬಸವೇಶ್ವರ ಭಾವಚಿತ್ರಕ್ಕೆ ಪುಷ್ಪನಮನ ಹಾಗೂ ಅನುಭವ ಕಾರ್ಯಕ್ರಮ ನಡೆಸಲಾಗುತ್ತದೆ. ಈ ಬಾರಿ ಸಮಾಜದ ಮುಖಂಡರು ಯಾವ ರೀತಿಯಲ್ಲಿ ಕಾರ್ಯಕ್ರಮ ನಡೆಸಬೇಕು ಎಂಬ ಬಗ್ಗೆ ಸಲಹೆ ನೀಡಬಹುದು ಎಂದರು.

ಬೇಲೂರು ತಾಲ್ಲೂಕು ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಹೆಬ್ಬಾಳು ಹಾಲಪ್ಪ ಮಾತನಾಡಿ, ವಿಶ್ವಗುರು ಬಸವಣ್ಣನವರು ಸಮಾಜಕ್ಕೆ ನೀಡಿದ ಅದ್ವಿತೀಯ ಕೊಡುಗೆ ಗಮನಿಸಿದ ರಾಜ್ಯ ಸರ್ಕಾರ ಬಸವಣ್ಣನವರ ಭಾವಚಿತ್ರವನ್ನು ಪ್ರತಿ ಕಚೇರಿಯಲ್ಲಿ ಹಾಕುವುದನ್ನು ಕಡ್ಡಾಯಗೊಳಿಸಿದೆ ಮತ್ತು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದೆ. ಬಸವಣ್ಣನವರ ಜಯಂತಿ ಅರ್ಥಪೂರ್ಣವಾಗಿ ನಡೆಸಬೇಕಿದೆ ಎಂದರು.

ಬೇಲೂರು ತಾಲೂಕು ವೀರಶೈವ ಲಿಂಗಾಯತ ಮಹಾಸಭಾಅಧ್ಯಕ್ಷ ಎ.ಎಸ್.ಬಸವರಾಜು ಮಾತನಾಡಿ, ಬಸವ ಜಯಂತಿ ದಿನ ಬಹುತೇಕ ಶುಭಕಾರ್ಯ ನಡೆಯುವ ಹಿನ್ನೆಲೆಯಲ್ಲಿ ಅಂದು ಸರಳ ಆಚರಣೆ ನಡೆಯುತ್ತದೆ. ಮೇ ತಿಂಗಳಲ್ಲಿ ಅದ್ದೂರಿ ಬಸವ ಜಯಂತಿ ಕಾರ್ಯಕ್ರಮ ನಡೆಸುವ ಹಿನ್ನೆಲೆಯಲ್ಲಿ ಆಸಮಯದಲ್ಲಿ ಅನುದಾನವನ್ನು ನೀಡಬೇಕು ಎಂದು ಮನವಿ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ರಾಜೇಗೌಡ, ತಾ.ಶಸಾಪ ಪ್ರಧಾನ ಕಾರ್ಯದರ್ಶಿ ರಾಜಕುಮಾರ್, ಖಜಾಂಚಿ ಧನಂಜಯ್, ನಿರ್ದೇಶಕರ ಶಿವಕುಮಾರ್ ಮೊಗಸಾವರ, ಶಿವಮರಿಯಪ್ಪ ಮುಂತಾದವರು ಹಾಜರಿದ್ದರು.

# ಮೋದಿ ಸರ್ಕಾರ ತಕ್ಕ ಪಾಠ ಕಲಿಸಲಿದೆ: ವಿಎಸ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ : ಕಾಶ್ಮೀರ ಘಟನೆ ಅತ್ಯಂತ ಹೀನ ಕೃತ್ಯ ಎಂದ ಸೋಮಣ್ಣ, ಕಾಶ್ಮೀರದಲ್ಲಿ 370 ಆರ್ಟಿಕಲ್ ತೆಗೆದ ಮೇಲೆ ಭವಿಷ್ಯದ ಭಾರತಕ್ಕೆ ಹತ್ತು ವರ್ಷದಲ್ಲಿ ಪ್ರಧಾನಿಯವರು ಅಭಿವೃದ್ಧಿಗೆ ಮುಂದಾಗಿದ್ದರು. ಇಂತಹ ಸಂದರ್ಭದಲ್ಲಿ ಕಾಶ್ಮೀರದ ಕೆಲ ತಿಳಿಗೇಡಿ ಪಾಕಿಸ್ತಾನಿಗಳು ಮಾಡಿರೋ ಹೇಯ ಕೃತ್ಯ ಇದನ್ನ ಇಡೀ ವಿಶ್ವವೇ ಖಂಡಿಸಿದೆ ಎಂದರು.

ಇದಕ್ಕೆ ತಕ್ಕಪಾಠ ಕಲಿಸಲು ಕೇಂದ್ರ ಹಲವು ಕ್ರಮ ಕೈಗೊಂಡಿದೆ. ಕೆಲ ದಿನ ಕಾದು ನೋಡಿ ಇನ್ನೂ ಕೆಲ ಕಠಿಣ ಕ್ರಮ ಕಾದಿದೆ ಎಂದರು.

ದೇಶದ ಸಾರ್ವಭೌಮತೆಗೆ ಯಾವುದೇ ಅಪಚಾರ ಆಗದಂತೆ ಪ್ರಧಾನಿ ಪ್ರಧಾನಿ ಕ್ರಮ ಕೈಗೊಳ್ಳಲಾಗಿದೆ. ವಿರೋಪ ಪಕ್ಷಗಳಿಗೆ ಟೀಕಿಸೋದು ಬಿಟ್ಟು ಬೇರೇನಿಲ್ಲ, ಪ್ರಧಾನಿ ಬಗ್ಗೆ ಮಾತಾಡಲು ಅವರಿಗೆ ಏನಿದೆ ಹೇಳಿ, ಹತ್ತು ವರ್ಷದಲ್ಲಿ 8 ಸಾವಿರ ಕೋಟಿ ಆದಾಯ ಪ್ರವಾಸೋದ್ಯಮ ದಿಂದ ಬಂದಿದೆ. ಇದನ್ನ ತಡೆಯಲಾಗದೆ ಪಾಕಿಸ್ತಾನದ ಕಡೆಯಿಂದ ಈ ಘಟನೆ ಆಗಿದೆ, ದೇಶಕ್ಕಿಂತ ದೊಡ್ಡವರು ಯಾರು ಇಲ್ಲ, ಏನೇನೊ ಹೇಳಿ ಜನರನ್ನ ದಾರಿ ತಪ್ಪಿಸದೆ ಅಭಿವೃದ್ಧಿ ಯಲ್ಲಿ ಕೈ ಜೋಡಿಸಿ ಎಂದು ಒತ್ತಾಯಿಸಿದರು.

ಯಾರೊ ಕೆಲವರು ಪ್ರಚಾರಕ್ಕೆ ಮಾತಾಡ್ತಾರೆ ದೇಶವೇ ದೊಡ್ಡದು ದೇಶಕ್ಕಿಂತ ನಾವ್ಯಾರು ದೊಡ್ಡವರಲ್ಲ ಎಂದರು.

# ಬಾಡಿ ಬಿಲ್ಡಿಂಗ್ ಸ್ಪರ್ಧೆ: ಎಂ.ಎಸ್. ಮಧು ಮಿಸ್ಟರ್ ಪವರ್ ಸ್ಟಾರ್ 2025



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಇತ್ತೀಚೆಗೆ ಅರಕಲಗೂಡಿನಲ್ಲಿ ನಡೆದ ಹಾಸನ ಜಿಲ್ಲಾ ಮಟ್ಟದ ದೇಹದಾರ್ಢ್ಯ ಸ್ಪರ್ಧೆಯಲ್ಲಿ ಅರಕಲಗೂಡಿನ ಎಂ.ಎಸ್. ಪವರ್ ಜಿಮ್‌ನ ಎಂ.ಎಸ್. ಮಧು, ಮಿಸ್ಟರ್ ಪವರ್ ಸ್ಟಾರ್ -2025 ಬಿರುದು ಪ್ರಶಸ್ತಿ ಪಡೆದುಕೊಂಡರು.

ಒ.ಎಂ.ಎಸ್. ಪವರ್ ಜಿಮ್ ಅರಕಲಗೂಡು, ಹಾಸನ ಜಿಲ್ಲಾ ಅಮೆಚೂರ್ ಬಾಡಿ ಬಿಲ್ಡರ್ಸ್ ಸಂಸ್ಥೆ, ಕರ್ನಾಟಕ ಅಮೆಚೂರ್ ಬಾಡಿ ಬಿಲ್ಡರ್ಸ್ ಸಂಸ್ಥೆ, ಇವರ ವತಿಯಿಂದ ಅರಕಲಗೂಡಿನಲ್ಲಿ ನಡೆದ ಹಾಸನ ಜಿಲ್ಲಾ ಮಟ್ಟದ ದೇಹದಾರ್ಢ್ಯ ಸ್ಪರ್ಧೆಯಲ್ಲಿ ಅತ್ಯುತ್ತಮ ಸ್ನಾಯುವಂತ ಬಿರುದನ್ನು ಹಾಸನದ ಎಂ.ಜೆ. ಫಿಟ್ನೆಸ್ ಜಿಮ್‌ನ ಗುಲ್ಬಂ ಖಾನ್ ಪಡೆದುಕೊಂಡರೆ.

ಅತ್ಯುತ್ತಮ ಪ್ರದರ್ಶನಕಾರ ಬಿರುದನ್ನು ಅರಕಲಗೂಡು ಎಂ.ಎಸ್. ಜಿಮ್‌ನ ಲೋಕೇಶ್ ಕೆ.ಜೆ. ಪಡೆದುಕೊಂಡರು. ಎಂ.ಟಿ. ಕೃಷ್ಣಗೌಡ, ಕ್ಲಾಸಿಕ್ 2025 ಬಿರುದನ್ನು ಹಿರಿಸಾವೆಯ ಮಾರುತಿ ಫಿಟ್ನೆಸ್ ಜಿಮ್‌ನ ವಿ. ಅಶ್ವಿನ್ ಪಡೆದುಕೊಂಡರು. ಈ ಸ್ಪರ್ಧೆಯ ಉದ್ಘಾಟನೆಯನ್ನು ಕಾಂಗ್ರೆಸ್ ನಾಯಕರದ ಎಂ.ಟಿ. ಕೃಷ್ಣಗೌಡರು ನೆರವೇರಿಸಿದರು.


ರಾಜ್ಯ ಬಾಡಿ ಬಿಲ್ಡರ್ಸ್ ಸಂಸ್ಥೆಯ ಉಪಾಧ್ಯಕ್ಷರಾದ ಶ್ರೀ ವಿ. ಮೋಹನ್ ಕುಮಾರ್, ಗೌರವ ಕಾರ್ಯದರ್ಶಿಗಳಾದ ವೆಂಕಟೇಶ್ ಖಜಾಂಚಿಗಳಾದ ರಾಜಶೇಖರ್‌ರಾವ್ ಸಹ ಕಾರ್ಯದರ್ಶಿ ಶ್ರೀನಿವಾಸ ಸ್ವಾಮಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಬಿರುದು, ಪ್ರಶಸ್ತಿ, ಬಹುಮಾನಗಳನ್ನು ಜಿಲ್ಲಾ ಆದಾಯ ತೆರಿಗೆ ಆಯುಕ್ತರು, ಚನ್ನಕೇಶವರವರು ವಿತರಣೆ ಮಾಡಿದರು. ಬೆಂಗಳೂರಿನ ಹಿರಿಯ ದೇಹ ದಾರ್ಢ್ಯ ಪಟು ವೆಂಕಟೇಶ್ವರ ಉಪಸ್ಥಿತರಿದ್ದರು.

ಈ ಸ್ಪರ್ಧೆಯಲ್ಲಿ ಜಿಲ್ಲೆಯ ವಿವಿಧ ಜಿಮ್‌ಗಳಿಂದ 40 ದೇಹ ದಾರ್ಢ್ಯಪಟುಗಳು ಭಾಗವಹಿಸಿದ್ದು, ಎತ್ತರ ವಿಭಾಗಗಳಲ್ಲಿ ಈ ಕೆಳಕಂಡವರು ವಿಜಯಿಗಳಾಗಿರುತ್ತಾರೆ.

# ನಾಗತವಳ್ಳಿ ಪಾರ್ಕ್ ಜಾಗ ಉಳಿಸಿ ಹೋರಾಟ

## ರಾಜ್ಯ ಮಟ್ಟದ ಹೋರಾಟಕ್ಕೆ ಮುಂದಾದ ಗ್ರಾಮಸ್ಥರು: ಶಾಸಕ ಸ್ವರೂಪ್ ಪ್ರಕಾಶ್ ಸಾಥ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ನಾಗತವಳ್ಳಿ ಗ್ರಾಮದ ಸರ್ವೆ ನಂಬರ್ 54ರ ನ 2 ಎಕರೆ ಜಾಗವನ್ನು ಪಾರ್ಕ್‌ಗಾಗಿ ಮೀಸಲಿಡಬೇಕು ಎಂದು ಆಗ್ರಹಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲು ಇಂದು ಬೆಳಿಗ್ಗೆ ನೂರಾರು ಸಂಖ್ಯೆಯಲ್ಲಿ ಗ್ರಾಮಸ್ಥರು ಬೆಂಗಳೂರಿಗೆ ತೆರಳಿದರು. ಹೋರಾಟಕ್ಕೆ ಶಾಸಕ ಸ್ವರೂಪ್ ಪ್ರಕಾಶ್ ಸಾಥ್ ನೀಡಿದರು.

ಗ್ರಾಮದ ಮುಖಂಡರು, ಮಹಿಳೆಯರು ನೂರಾರು ಸಂಖ್ಯೆಯಲ್ಲಿ ಜಮಾಯಿಸಿ ಪಾರ್ಕ್ ಜಾಗವನ್ನು ಅಕ್ರಮವಾಗಿ ಖಾಸಗಿಯವರಿಗೆ ಕೆ.ಎ.ಐ.ಡಿ.ಬಿ ಅಧಿಕಾರಿಗಳು ಮಂಜೂರು ಮಾಡಿಕೊಟ್ಟಿದ್ದಾರೆ ಎಂದು ಆರೋಪಿಸಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಗ್ರಾಮ ಪಂಚಾಯಿತಿ ಸದಸ್ಯ ದೇವರಾಜು ಮಾತನಾಡಿ, ಗ್ರಾಮದ ಪಾರ್ಕ್ ಜಾಗಕ್ಕಾಗಿ ಕಳೆದ 10 ವರ್ಷಗಳಿಂದ ಹೋರಾಟ ನಡೆಯುತ್ತಿದೆ. ಆದರೆ ಕೆ.ಎ.ಐ.ಡಿ.ಬಿ ಅಧಿಕಾರಿಗಳು ಶಾಮೀಲಾಗಿ ಖಾಸಗಿ ಪುಷ್ಪಗಿರಿ ವೇರ್ ಹೌಸ್ ಮಾಲೀಕರಿಗೆ ಮಂಜೂರು ಮಾಡಿ ಕೊಟ್ಟಿದ್ದಾರೆ ಕೂಡಲೇ ಈ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಇದೇ ವಿಚಾರವಾಗಿ ಹಾಸನದ ಜಿಲ್ಲಾಧಿಕಾರಿಗಳ ಕಚೇರಿ, ಕೆ.ಎ.ಐ.ಡಿ.ಬಿ ಅಧಿಕಾರಿಗಳ ಕಚೇರಿ, ಹಾಗೂ ಪಾರ್ಕಿಗೆ ಮೀಸಲಿಟ್ಟದ ಸ್ಥಳ ಸೇರಿದಂತೆ ವಿವಿಧಡೆ ಪ್ರತಿಭಟನೆಗಳು ನಡೆದರು ಅಧಿಕಾರಿಗಳು ಈ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ. ಬಳಿಕ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ. ಬಿ ಪಾಟೀಲ್ ರವರು ಪಾರ್ಕ್ ಜಾಗವನ್ನು ಪಾರ್ಕಿಗಾಗಿಯೇ ಮೀಸಲಿರಿಸುವಂತೆ ಆದೇಶ ಹೊರಡಿಸಿದರು ಈವರೆಗೆ ಅಧಿಕಾರಿಗಳು ಜಾಗವನ್ನು ತೆರವುಗೊಳಿಸಲು ಮುಂದಾಗಿಲ್ಲ ಎಂದರು.

ಗ್ರಾಮದ ಸುನಿಲ್ ಮಾತನಾಡಿ, 2 ಎಕರೆ ಪಾರ್ಕ್ ಜಾಗ ಯಾರೊಬ್ಬರ ಸ್ವತ್ತಲ್ಲ. ಗ್ರಾಮದ ಜನರ ಅನುಕೂಲಕ್ಕಾಗಿ ಪಾರ್ಕ್ ನಿರ್ಮಾಣ ಮಾಡಲು ಮೀಸಲಿಟ್ಟಿರುವ ಜಾಗ ಇದಾಗಿದೆ. ಅಧಿಕಾರಿಗಳ ನಿರ್ಲಕ್ಷಕ್ಕೆ ಇದೀಗ ಎರಡು ಎಕರೆ ಬೆಲೆಬಾಳುವ ಜಾಗ ಖಾಸಗಿಯವರ ಪಾಲಾಗುತ್ತಿದೆ ಇದನ್ನು ಸರ್ಕಾರ ತಡೆಯಬೇಕಿದೆ ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಮಾಜಿ ಪ್ರಧಾನಿ ದೇವೇಗೌಡರು, ಮಾಜಿ ಸಚಿವ ಎಚ್.ಡಿ ರೇವಣ್ಣ, ಶಾಸಕರಾದ ಸ್ವರೂಪ ಪ್ರಕಾಶ್ ಸೇರಿದಂತೆ ಹಲವರು ಜಾಗ ಉಳಿಸಲು ಮನವಿ ಮಾಡಿದ ಮೇರೆಗೆ ಇದೀಗ ಸಚಿವರಾದ ಎಂಬಿ ಪಾಟೀಲ್ ರವರು ಜಾಗವನ್ನು ಪಾರ್ಕಿಗೆ ಮೀಸಲಿಡಲು ಆದೇಶಿಸಿದ್ದಾರೆ ಅದರಂತೆ ಕೆ.ಎ.ಐ.ಡಿ.ಬಿ ಅಧಿಕಾರಿಗಳು ಜಾಗವನ್ನು ತೆರವುಗೊಳಿಸುವ ಬದಲಾಗಿ ಖಾಸಗಿಯವರ ಜೊತೆ ಹೊಂದಾಣಿಕೆ ಮಾಡಿಕೊಂಡು ಹೋಗುತ್ತಿದ್ದಾರೆ ಎಂದು ತಮ್ಮ ಅಸಮಾಧಾನ ವ್ಯಕ್ತಪಡಿಸಿದ್ದರು.

ಇದೀಗ ರಾಜ್ಯಮಟ್ಟದ ಹೋರಾಟ ನಡೆಸಲು ಕ್ಕೆ ಗ್ರಾಮಸ್ಥರು ಸಜ್ಜಾಗಿದ್ದು ಇಂದು ಬೆಂಗಳೂರಿನ ಫ್ರೀಡಂ ಪಾರ್ಕ್ ಹಾಗೂ ಕೆ.ಎ.ಐ.ಡಿ.ಬಿ ಕೇಂದ್ರ ಕಚೇರಿ ಎದುರು ಗ್ರಾಮಸ್ಥರ ಸಮ್ಮುಖದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಸರ್ಕಾರ ಹಾಗೂ ಸಂಬಂಧಿಸಿದ ಸಚಿವರು ಮತ್ತು ಅಧಿಕಾರಿಗಳು ಎಚ್ಚೆತ್ತುಕೊಂಡು ಕೂಡಲೇ ಜಾಗವನ್ನು ಉಳಿಸುವ ಕೆಲಸ ಮಾಡಬೇಕಿದೆ ಇಲ್ಲವಾದರೆ ಗ್ರಾಮಸ್ಥರೆಲ್ಲರೂ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳುವುದು ಖಚಿತ ಎಂದು ಎಚ್ಚರಿಸಿದರು.

ಪ್ರತಿಭಟನೆ ವೇಳೆ ನಾಗತವಳ್ಳಿ ಗ್ರಾಮಸ್ಥರಾದ ಶರತ್, ಶೇಖರ್, ಪುಟ್ಟರಾಮು, ರಂಗಣಿ, ಸರೋಜಾ, ಕೋಮಲ, ರೇಣುಕಾ, ಗವಿ, ಆನಂದ್, ಶಿವಕುಮಾರ್, ಪುಟ್ಟರಾಜು, ಕೆಂಪೇಗೌಡ, ಕಿರಣ್, ರವಿ, ಇತರರು ಉಪಸ್ಥಿತರಿದ್ದರು

# ರೈಲ್ವೆ ಮೇಲ್ಸೇತುವೆ ಕಾಮಗಾರಿ ವಿಳಂಬ

## ಕಾಮಗಾರಿ ಸಂಪೂರ್ಣಗೊಳಿಸಲು ಡೆಡ್ ಲೈನ್ ನೀಡಿದ ಸಂಸದರು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹೊಳೆನರಸೀಪುರ : ತಾಲೂಕಿನ ಹಂಗರಹಳ್ಳಿ ರೈಲ್ವೆ ಮೇಲ್ ಸೇತುವೆಯ ಕಾಮಗಾರಿ ವಿಳಂಬಕ್ಕೆ ಗುತ್ತಿಗೆದಾರ ಹಾಗೂ ರೈಲ್ವೆ ಅಧಿಕಾರಿಗಳ ತಂಡವನ್ನು ಸ್ಥಳಕ್ಕೆ ಕರೆಸಿಕೊಂಡು ಸೇತುವೆಯ ನೀಲಿನಕ್ಷೆಯನ್ನು ಪರಿಶೀಲಿಸಿ ಸಂಪೂರ್ಣ ಸೇತುವೆಯ ಕಾಮಗಾರಿಯನ್ನು ವೀಕ್ಷಣೆ ಮಾಡಿದ ನಂತರ ಕಾಮಗಾರಿಯ ವಿಳಂಬಕ್ಕೆ ಕಾರಣರಾದ ಎಂ ವಿ ಕನ್ಸ್ಟ್ರಕ್ಷನ್ ಮಾಲೀಕ ವೆಂಕಟೇಶ್ ನಡೆಗೆ ಸಂಸದ ಶ್ರೇಯಸ್ ಪಟೇಲ್ ಆಕ್ಷೇಪ ವ್ಯಕ್ತಪಡಿಸಿ, ರೈಲ್ವೆ ಮೇಲ್ಸೇತುವೆ ಕಾಮಗಾರಿ ವಿಳಂಬಕ್ಕೆ ಸಂಸದ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಂಗಳವಾರ ಹಂಗರಹಳ್ಳಿಯ ರೈಲ್ವೆ ಮೇಲ್ಸೇತುವೆ ಕಾಮಗಾರಿಯ ಸ್ಥಳಕ್ಕೆ ಖುದ್ದು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಈ ವರ್ಷದ ಡಿಸೆಂಬರ್ ತಿಂಗಳಿನೊಳಗೆ ಸಂಪೂರ್ಣ ಕಾಮಗಾರಿಯನ್ನು ಮುಗಿಸಿ ಸುಗಮ ಸಂಚಾರಕ್ಕೆ ಬಿಟ್ಟುಕೊಡಬೇಕು ಎಂದು ಡೆಡ್ ಲೈನ್ ವಿಧಿಸಿದ್ದಾರೆ. ಮತ್ತೇನಾದರೂ ಇಲ್ಲಸಲ್ಲದ ಕಾರಣ ನೀಡಿ ವಿಳಂಬ ಮಾಡಿದರೆ ಸಂಸದ ಎಂಬುದನ್ನೇ ಮರೆತು ಸ್ಥಳದಲ್ಲೇ ಕುಳಿತು ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದ ಸಂಸದರು ನಿಗದಿತ ಅವಧಿಯೊಳಗೆ ಮೇಲ್ ಸೇತುವೆಯ ಕಾಮಗಾರಿ ಪೂರ್ಣಗೊಳಿಸದಿದ್ದರೆ ಕ್ರಮಕ್ಕೆ ಮುಂದಾಗ ಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಕೆಲಸಗಾರರ ಕೊರತೆಯಿಂದ ಕಾಮಗಾರಿ ವಿಳಂಬವಾಗಿದೆ ಎಂಬ ಕಾರಣ ನೀಡಿದ ಗುತ್ತಿಗೆದಾರನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕುಸಿದು ಬಿದ್ದ ಸೇತುವೆಯ ಮರು ನಿರ್ಮಾಣಕ್ಕೆ 2023 ರಲ್ಲಿ ಚಾಲನೆ ನೀಡಿ ಎರಡು ವರ್ಷ ಕಳೆಯುತ್ತಿದ್ದರು ಕಾಮಗಾರಿ ಗುಣಮಟ್ಟದಿಂದ ಕ್ಷಿಪ್ರ ಗತಿಯಲ್ಲಿ ನಡೆಯುತ್ತಿಲ್ಲ ಎಂಬ ದೂರು ಸಾರ್ವಜನಿಕರಿಂದ ವ್ಯಾಪಕವಾಗಿ ಕೇಳಿಬರುತ್ತಿದೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ರೀತಿ ಮಂದಗತಿಯಲ್ಲಿ ಕಾಮಗಾರಿ ನಡೆಸಿದರೆ ನಿತ್ಯ ಸಂಚರಿಸುವ ಪ್ರಯಾಣಿಕರಿಗೆ ಅನಾನುಕೂಲವಾಗುತ್ತಿದೆ. ನಿಮ್ಮ ಬೇಜವಾಬ್ದಾರಿ ಕೆಲಸ ನಿರ್ವಹಣೆಯಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ ಎಂದು ಅಸಮಾಧಾನ ಹೊರಹಾಕಿದರು. ಮೈಸೂರು ವಿಭಾಗೀಯ ಅಸಿಸ್ಟೆಂಟ್ ಇಂಜಿನಿಯರ್ ಬಶೀರ್ ಹಾಗೂ ಎಕ್ಸಿಕ್ಯೂಟಿವ್ ಇಂಜಿನಿಯರ್ ವಿನೋದ್ ಹಾಗೂ ಗುತ್ತಿಗೆದಾರ ವೆಂಕಟೇಶ್ ಅವರನ್ನು ಸಂಸದರು ತರಾಟೆಗೆ ತೆಗೆದುಕೊಂಡರು. ಮುಂದೆ ಇದೇ ಬೆಳವಣಿಗೆ ಮುಂದುವರಿಯದಂತೆ ಸೂಚಿಸಿದರು. ವಿಳಂಬಕ್ಕೆ ಕಾರಣ, ನಿರ್ವಹಣೆ,ಕನ್ಸ್ಟ್ರಕ್ಷನ್ ಗೆ ಸಂಬಂಧಿಸಿದ ವಿಷಯ, ಕಾಮಗಾರಿ ಪೂರ್ಣಗೊಳ್ಳಲು ಪರಿಹಾರ ಕಂಡುಕೊಳ್ಳುವಿಕೆ, ವಿಷಯವಾಗಿ ಚರ್ಚಿಸಿ ಶೀಘ್ರವಾಗಿ ಕಾಮಗಾರಿ ಮುಗಿಸುವಂತೆ ಸೂಚನೆ ನೀಡಿದರು. ಸಾರ್ವಜನಿಕರ ಹಿತ ದೃಷ್ಟಿಯಿಂದ ಪ್ರಯಾಣಿಕರ ಅನುಕೂಲಕ್ಕಾಗಿ ನಿರ್ಮಿಸಲಾಗುತ್ತಿರುವ ಸೇತುವೆ ಅತಿ ಶೀಘ್ರವಾಗಿ ಸಾರ್ವಜನಿಕ ಉಪಯೋಗಕ್ಕೆ ಬಳಕೆ ಆಗಬೇಕು.

ಕೇಂದ್ರ ಸರ್ಕಾರದ ಅರ್ಧಭಾಗ ಅನುದಾನ ರಾಜ್ಯ ಸರ್ಕಾರದ ಅರ್ಧಭಾಗ ಅನುದಾನದ ನೆರವಿನಿಂದ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು. ಹಂಗರಹಳ್ಳಿ ರೈಲ್ವೆ ಮೇಲ್ ಸೇತುವೆಯನ್ನು 2017ರಲ್ಲಿ 34 ಕೋಟಿ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿತ್ತು. ಕಳಪೆ ಕಾಮಗಾರಿಯ ಪರಿಣಾಮದಿಂದ ಕುಸಿದು ಬಿದ್ದು ಸಂಚಾರಕ್ಕೆ ತೊಡಕಾಗಿತ್ತು. ಸಾರ್ವಜನಿಕರ ಒತ್ತಾಯದಿಂದ ದುರಸ್ತಿ ಮಾಡದೆ ಮರು ಸೇತುವೆಯನ್ನು ನಿರ್ಮಿಸಲು 9.65 ಕೋಟಿ ಅಂದಾಜು ವೆಚ್ಚದಲ್ಲಿ ಸೇತುವೆಯ 240 ಮೀಟರ್ ಉದ್ದವನ್ನು ತೆರವುಗೊಳಿಸಿ ಮರು ನಿರ್ಮಿಸಲಾಗುತ್ತಿದೆ. ಸಾರ್ವಜನಿಕರ ತೆರಿಗೆ ಹಣದಲ್ಲಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಬೇಕಾಬಿಟ್ಟಿ ಆಟವಾಡುವಂತಿದೆ. ಮಳೆಗಾಲ ಪ್ರಾರಂಭವಾದರೆ ಕಾಮಗಾರಿಗೆ ಹಿನ್ನಡೆಯಾಗುತ್ತದೆ. ಬೇಸಿಗೆ ಸಮಯದಲ್ಲಿ ಕಾಮಗಾರಿ ಸ್ಥಗಿತಗೊಳಿಸಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಅಂದ ಹಾಗೆ ಸಾರ್ವಜನಿಕರ ತೆರಿಗೆ ಹಣ ದಿಂದ ನಿರ್ಮಿಸಲಾಗುತ್ತಿರುವ ಸೇತುವೆ ಸಾರ್ವಜನಿಕರ ಉಪಯೋಗಕ್ಕೆ ಅತಿ ಬೇಗನೆ ಸಿಗುವಂತಾಗುವ ನಿಟ್ಟಿನಲ್ಲಿ ಎಲ್ಲರೂ ಕಾರ್ಯೋನ್ಮುಖವಾಗುವ ಅವಶ್ಯಕತೆ ಇದೆ ಎಂದು ತಿಳಿಸಿದರು.


ಪಟ್ಟಣ ಯಾವುದೇ ರೀತಿಯಲ್ಲಿಯೂ ಉದ್ದ ಅಗಲ ವಿಸ್ತೀರ್ಣಗೊಂಡಿಲ್ಲ. ಕೆಲವರು ನೂರಾರು ಯೋಜನೆಗಳನ್ನು ತರಬಹುದಿತ್ತು ತಮ್ಮ ವೈಯಕ್ತಿಕ ಹಿತಾಸಕ್ತಿಯಿಂದ ರಸ್ತೆಗಳನ್ನು ಹಾಳು ಮಾಡಬಾರದು. ಬಿ ಎಚ್ ರಸ್ತೆ ಅಗಲೀಕರಣದ ಕಾಮಗಾರಿ ಮಾಡುತ್ತಿದ್ದಾರೆ. ಕೆಲವು ನಿವಾಸಿಗಳ ಮನೆ ಮತ್ತು ಜಾಗ ರಸ್ತೆಗೆ ಸೇರಿಕೊಳ್ಳುತ್ತಿದ್ದು ಅಂತಹ ಫಲಾನುಭವಿಗಳಿಗೆ ಮೊದಲು ಪರಿಹಾರ ಕೊಟ್ಟು ಬಳಿಕ ಕಾಮಗಾರಿ ಹಮ್ಮಿಕೊಳ್ಳಬೇಕಿತ್ತು. ಆದರೆ ಇವರು ಇದ್ದಕ್ಕಿದ್ದಂತೆ ರಸ್ತೆ ಅಗಲೀಕರಣ ಹಮ್ಮಿಕೊಂಡಿರುವುದರಿಂದ ಯಾವುದೇ ಪರಿಹಾರ ನೀಡದೆ ಇದ್ದ ಕಾರಣ ಸಾರ್ವಜನಿಕರು ದೂರು ನೀಡಿದ್ದಾರೆ. ಸಾರ್ವಜನಿಕರಿಗೆ ತೊಂದರೆ ಆಗದಂತೆ ಕೆಲವು ಶರತ್ತುಗಳ ಆಧಾರದ ಮೇಲೆ ನ್ಯಾಯ ದೊರಕಿಸಿಕೊಡಬೇಕು. ಎಂದು ಹೇಳಿದರು

ಪತ್ರಕರ್ತರು ಕೇಳಿದ ಕೆಲವು ಪ್ರಶ್ನೆಗಳಿಗೆ ಉತ್ತರಿಸಿದ ಸಂಸದ ಶ್ರೇಯಸ್ ಎಂ ಪಟೇಲ್ ಅವರು ಕೇಂದ್ರ ಸರ್ಕಾರದಿಂದ ರಸ್ತೆ ಕಾಮಗಾರಿಗೆ ಕಳೆದ ವರ್ಷ ಅನುದಾನ ಬಂದಿತ್ತು. ಈ ಕಾಮಗಾರಿ ಕುಂಠಿತಗೊಂಡಿದ್ದರಿಂದ ಸಂಬಂಧಪಟ್ಟ ಸಚಿವರಿಗೆ ಮನವಿ ಮಾಡಿ ತುರ್ತಾಗಿ ಈ ಕೆಲಸ ಮಾಡಿಕೊಡಬೇಕೆಂದು ಕೇಳಿಕೊಂಡಿದ್ದೆ. ಯಾವುದೇ ಸರ್ಕಾರ ಬಂದರೂ ನಮ್ಮ ತಾತ ಅವರ ರಾಜಕೀಯದ ಅವಧಿಯಲ್ಲಿ ನೂರಾರು ಕೆಲಸ ಕಾರ್ಯಗಳನ್ನು ಮಾಡಿದ್ದಾರೆ.

ಅದೇ ರೀತಿ ಇವರು ಸಹ ಮಾಡಿಕೊಂಡು ಬಂದಿದ್ದಾರೆ ಯಾರೇ ಅನುದಾನ ತಂದರು ವೈಯಕ್ತಿಕವಾಗಿ ತರಬಾರದು ಸಾರ್ವಜನಿಕರ ಹಿತದೃಷ್ಟಿಯಿಂದ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕು ಎಂದರು

# ಜಾನಪದ ಎಲ್ಲರ ಎದೆಗಳನ್ನು ತಟ್ಟುವ ಕಲೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಜಾನಪದ ಕಲೆ ಯಾರನ್ನೂ ನೋಯಿಸುವುದಿಲ್ಲ. ಎಲ್ಲರ ಎದೆಯನ್ನೂ ತಟ್ಟುತ್ತದೆ. ರೋಮಾಂಚನಗೊಳಸಿತ್ತದೆ. ಆದರೆ ನಾಗರಿಕ ಕಲೆಯು ಹೃದಯಗಳನ್ನು ತಟ್ಟುವುದಕ್ಕಿಂತ ಹೆಚ್ಚಾಗಿ ಎಲ್ಲರನ್ನು ಘಾಸಿಗೊಳಿಸುತ್ತದೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಚ್.ಎಲ್. ಮಲ್ಲೇಶ್ ಗೌಡ ಹೇಳಿದರು.

ನಗರದ ಎಂ.ಜಿ. ರಸ್ತೆ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಸಾಂಸ್ಕೃತಿಕ ವೇದಿಕೆ ಮತ್ತು ಐ.ಕ್ಯೂ.ಎ.ಸಿ. ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಜಾನಪದ ಉತ್ಸವ, ಗ್ರಾಮೀಣ ಕಲರವ ಮತ್ತು ವಾರ್ಷಿಕ ಸಂಚಿಕೆ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡ ಜಾನಪದಕ್ಕೆ ವಿಶ್ವವನ್ನು ಕುಣಿಸುವ ಶಕ್ತಿ ಇದೆ. ಅದು ಈ ಜನಪದದ ಸತ್ವ. ಜಾನಪದದ ತುತ್ತ ತುದಿಯ ಸೊಗಡನ್ನು ಉಂಡು, ಇವತ್ತು ನಾಗರಿಕತೆಯ ತುತ್ತ ತುದಿಯಲ್ಲಿ ನಿಂತು ಎಲ್ಲವನ್ನು ಮರೆಯುತ್ತಿರುವ ಹಾಗೂ ಬರಡು ಆಗಿರುವ ಬೋರೆಯನ್ನು ಕೂಡ ನೋಡುತ್ತಿದ್ದೇವೆ ಎಂದು ಬೇಸರವ್ಯಕ್ತಪಡಿಸಿದರು.

ನಮ್ಮ ತಲೆ ಮಾರಿಗೆ ಜಾನಪರ ಮರೆತು ಹೋಗಿಲ್ಲ. ಆದರೆ ಇಂದಿನ ತಲೆಮಾರಿಗೆ ಅದನ್ನು ನೊಡುವ ಸೌಭಾಗ್ಯ ಪೂರ್ಣ ಪ್ರಮಾಣದಲ್ಲಿ ಸಿಕ್ಕಿಲ್ಲ ಎನ್ನುವ ನೋವು ನನ್ನಲ್ಲಿದೆ. ನಮ್ಮ ತಲೆಮಾರಿನ ಜನ ಓದುವುದೇ ಸಂಭ್ರಮ ಎಂದುಕೊಂಡು ಅದನ್ನೆಲ್ಲಾ ಮೂಲೆ ಸೇರಿಸಿ ಬಿಟ್ಟೆವು. ನಮ್ಮಪ್ಪ, ನಮ್ಮಜ್ಜ ಏನು ಮೂಟೆ ಕಟ್ಟಿ ಬಿಟ್ಟಿ ಹೋಗಿದ್ದರೂ ಅದನ್ನು ಹೊತ್ತುಕೊಂಡು ಬಂದು ನಿಮ್ಮ ಎದುರಿಗೆ ಇಡುವ ಶಕ್ತಿ ನಮಗೆ ಇರಲಿಲ್ಲ. ಅದನ್ನು ನಮ್ಮ ತಲೆಮಾರು ಮಾಡಬೇಕಿತ್ತು. ಆದರೆ ಮಾಡಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜಾನಪದ ಹಾಗೂ ಗ್ರಾಮೀಣ ಸೊಗಡು ಬಿಂಬಿಸುವ ಮಾದರಿಗಳನ್ನು ಕಾಲೇಜಿನ ವಿದ್ಯಾರ್ಥಿಗಳು ನಿರ್ಮಿಸಿದ್ದರು. ಹಿಂದಿನ ದಿನಗಳಲ್ಲಿ ನಡೆಯುತ್ತಿದ್ದ ಮದುವೆ ಮಾದರಿಗಳು, ಆಚರಣೆಹಳನ್ನು ವಿದ್ಯಾರ್ಥಿನಿಯರು ಪ್ರದರ್ಶಿಸಿದರು. ಗ್ರಾಮೀಣ ಕ್ರೀಡಾಕೂಟ ಎಲ್ಲಾವು ನೋಡುಗರ ಗಮನಸೆಳೆಯಿತು.

ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಜಾನಪದ ಕಲಾವಿದ ಬಿ.ಟಿ. ಮಾನವ, ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲೆ ಕೆ.ಜಿ. ಕವಿತ, ವಿಷ್ಣು ಸೇನಾ ಸಮಿತಿ ಅಧ್ಯಕ್ಷ ಬಿ.ಎನ್. ಮಹಾಂತೇಶ್, ಸರ್.ಎಂ. ವಿಶ್ವೇಶ್ವರಯ್ಯ ಸಂಘದ ಅಧ್ಯಕ್ಷ ಎಂ. ಸುನಿಲ್ ಕುಮಾರ್, ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಬಾಲಸುಬ್ರಹ್ಮಣ್ಯ, ನಗರಸಭೆ ಮಾಜಿ ಸದಸ್ಯ ಚಂದ್ರಶೇಖರ್, ಸಮಾಜ ಸೇವಕ ಎಚ್.ಆರ್. ಪ್ರದೀಪ್ ಕುಮಾರ್, ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ ಅಧ್ಯಕ್ಷ ಸಚಿನ್, ವಾರ್ಷಿಕ ಸಂಚಿಕೆ ಸಂಚಾಲಕ ಬಿ.ಹೆಚ್. ರಾಮೇಗೌಡ, ಸಾಂಸ್ಕೃತಿಕ ವೇದಿಕೆ ಕಾರ್ಯದರ್ಶಿ ಹೆಚ್.ಎನ್. ಹರೀಶ್, ಉಪನ್ಯಾಸಕ ಮಹೇಶ್, ಇಂಗ್ಲೀಷ್ ಭಾಷೆ ಉಪನ್ಯಾಸಕ ಎಸ್. ಯೋಗೇಶ್, ಹರ್ಷಾ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮದ ಸಂಚಾಲಕ ಹರೀಶ್ ಸ್ವಾಗತಿಸಿದರು.

# ಇತಿಹಾಸದಲ್ಲಿ ಈ ದಿನ

## ಏಪ್ರಿಲ್ 25

**1964:** 11ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳಲ್ಲಿ ಶಹರ್ ಔರ್ ಸಪ್ನಾ ಚಿತ್ರಕ್ಕೆ ಸ್ವರ್ಣ ಕಮಲ ಪ್ರಶಸ್ತಿ ಲಭಿಸಿತು.

**1982:** ದೆಹಲಿಯಲ್ಲಿ ಬಣ್ಣದ ದೂರದರ್ಶನ ಪ್ರಸಾರ ಪ್ರಾರಂಭವಾಯಿತು.

# ಏ. 28 ರಂದು ರಾಜ್ಯ ಮಟ್ಟದ ಚುಟುಕು ಕವಿಗೋಷ್ಠಿ

ಸಕಲೇಶಪುರ : ತಾಲ್ಲೂಕು ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಏ. 28 ರಂದು ಚುಟುಕು ಕವಿ ಕಾವ್ಯ ಕಾಜಾಣ ಮತ್ತು ರಾಜ್ಯ ಮಟ್ಟದ ಚುಟುಕು ಕವಿಗೋಷ್ಠಿ ಹಾಗೂ ಬಸವಶ್ರೀ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ತಾಲೂಕು ಚುಸಾಪ ಅಧ್ಯಕ್ಷ ಜಿ. ಮಲ್ಲೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮವು ಸಕಲೇಶಪುರ ಪಟ್ಟಣದ ಲಯನ್ಸ್ ಸಭಾಂಗಣದ ಜಾನಪದ ಜಂಗಮ ಎಸ್.ಕೆ ಕರೀಂ ಖಾನ್ ವೇದಿಕೆಯಲ್ಲಿ ಬೆಳಗ್ಗೆ 9 ಗಂಟೆಗೆ ಆರಂಭವಾಗಲಿದೆ, ಉದ್ಘಾಟನೆಯನ್ನು ಪರಿಷತ್ ಸಂಸ್ಥಾಪಕರಾದ ಡಾ ಡಾ.ಎಂ.ಜಿ.ಆರ್.ಅರಸ್ ನೆರವೇರಿಸುವರು. ಹಾಸನ ಜಿಲ್ಲಾಧ್ಯಕ್ಷ ಬಾ.ನಂ ಲೋಕೇಶ್ ಅಧ್ಯಕ್ಷತೆ ವಹಿಸುವರು. ಶಾಸಕರಾದ ಸಿಮೆಂಟ್ ಮಂಜು ಅವರು ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡುವರು. ಯಸಳೂರಿನ ತೆಂಕಲಗೂಡು ಬೃಹನ್ಮಠದ ಶ್ರೀ ಶ್ರೀ ಶ್ರೀ ಷ. ಬ್ರ. ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿಯವರು ದಿವ್ಯ ಸಾನ್ನಿಧ್ಯ ವಹಿಸುವರು.

# ಭಯೋತ್ಪಾದಕ ಕೃತ್ಯ ಖಂಡಿಸಿ ಪ್ರತಿಭಟನೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಕೃತ್ಯವನ್ನು ಖಂಡಿಸಿ ಹಾಗೂ ಅಮಾಯಕರನ್ನು ಹತ್ಯೆ ಭಯೋತ್ಪಾದಕರ ಹುಟ್ಟಡಗಿಸಲು ಆಗ್ರಹಿಸಿ ಕಾಂಗ್ರೆಸ್ ಕಾರ್ಯಕರ್ತರು ಬುಧವಾರ ರಾತ್ರಿ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಹೇಮಾವತಿ ಪ್ರತಿಮೆ ಮುಂಭಾಗದಿಂದ ಉಪವಿಭಾಗಾಧಿಕಾರಿಗಳ ಕಚೇರಿವರೆಗೆ ಕ್ಯಾಂಡಲ್ ಪ್ರಜ್ವಲನದ ಮೂಲಕ ಮೌನ ಮೆರವಣಿಗೆ ನಡೆಸಿ, ಭಯೋತ್ಪಾದಕರ ವಿರುದ್ಧ ಘೋಷಣೆಗಳನ್ನು ಕೂಗಿದರು. ಭಯೋತ್ಪಾದಕ ಘಟನೆಯಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡ ಮುರಳಿ ಮೋಹನ್ ಅವರು, ಆಜಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಕೃತ್ಯಗಳು ಅತ್ಯಂತ ಖಂಡನೀಯ. ಈ ಅಮಾನವೀಯ ಹತ್ಯೆಯನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ಭಯೋತ್ಪಾದಕರ ವಿರುದ್ಧ ಉಗ್ರ ಕ್ರಮ ಕೈಗೊಳ್ಳಲು ಕೇಂದ್ರ ಸರ್ಕಾರ ತಕ್ಷಣ ಮುಂದಾಗಬೇಕು ಎಂದು ಒತ್ತಾಯಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248